ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 23–12–2020

# ಪತ್ರಿಕಾ ಪ್ರಕಟಣೆ

## ತಾಂತ್ರಿಕ ಸಲಹಾ ಸಮಿತಿಯ ಸಲಹೆಯಂತೆ ನೈಟ್ ಕರ್ಫ್ಯೂ ಜಾರಿ: ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್

**ಬೆಂಗಳೂರು, ಡಿಸೆಂಬರ್ 23 (ಕರ್ನಾಟಕ ವಾರ್ತೆ):**

ಕಳೆದ 14 ದಿನಗಳಲ್ಲಿ ಯು.ಕೆ.ಯಿಂದ ಬಂದವರ ಮೇಲೆ ಆರೋಗ್ಯ ಇಲಾಖೆ ನಿಗಾ 2,500 ಪ್ರಯಾಣಿಕರ ಮೇಲೆ ನಿಗಾ, ಇನ್ನಷ್ಟು ಮಾಹಿತಿ ಸಂಗ್ರಹ ತಾಂತ್ರಿಕ ಸಲಹಾ ಸಮಿತಿಯೊಂದಿಗೆ ಚರ್ಚಿಸಿದ ಬಳಿಕ ರಾಜ್ಯದಲ್ಲಿ ರಾತ್ರಿ ಕರ್ಫ್ಯೂ ವಿಧಿಸಲು ತೀರ್ಮಾನ ಕೈಗೊಳ್ಳಲಾಗಿದೆ. ಈ ನಡುವೆ, ಯುನೈಟೆಡ್ ಕಿಂಗ್ ಡಮ್ ನಿಂದ ಬಂದ ಪ್ರಯಾಣಿಕರ ಮೇಲೆ ನಿಗಾ ಇರಿಸಲಾಗಿದೆ ಎಂದು ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್ ತಿಳಿಸಿದರು.

ಯು.ಕೆ.ಯಲ್ಲಿ ಹೊಸ ಪ್ರಭೇದದ ಕೊರೊನಾ ವೈರಸ್ ಪತ್ತೆಯಾದ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಿರುವ ಮುನ್ನೆಚ್ಚರಿಕೆ ಕ್ರಮಗಳ ಕುರಿತು ತಾಂತ್ರಿಕ ಸಲಹಾ ಸಮಿತಿಯೊಂದಿಗೆ ಸಚಿವ ಡಾ.ಕೆ.ಸುಧಾಕರ್ ಸುದೀರ್ಘ ಸಭೆ ನಡೆಸಿದರು. ನಂತರ ಸಚಿವರು ಗೃಹಕಚೇರಿ ಕೃಷ್ಣಾಗೆ ತೆರಳಿ, ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ಸಭೆಯಲ್ಲಾದ ಚರ್ಚೆ ಕುರಿತು ಮಾಹಿತಿ ನೀಡಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಡಾ.ಕೆ.ಸುಧಾಕರ್, ತಾಂತ್ರಿಕ ಸಲಹಾ ಸಮಿತಿ ಜತೆ ಚರ್ಚಿಸಿದ ಬಳಿಕ ನೈಟ್ ಕರ್ಫ್ಯೂ ಕುರಿತು ತೀರ್ಮಾನ ಕೈಗೊಳ್ಳಲಾಗಿದೆ. ಇಂದಿನಿಂದ ಜನವರಿ 2 ರವರೆಗೆ ಪ್ರತಿ ದಿನ ರಾತ್ರಿ 10 ಗಂಟೆಯಿಂದ ಬೆಳಗ್ಗೆ 6 ಗಂಟೆವರೆಗೆ ಇಡೀ ರಾಜ್ಯದಲ್ಲಿ ಕರ್ಫ್ಯೂ ವಿಧಿಸಲಾಗುತ್ತದೆ. ಜನರು ರಾತ್ರಿ 10 ರೊಳಗೆ ತಮ್ಮ ಎಲ್ಲ ಚಟುವಟಿಕೆಗಳನ್ನು ಮುಗಿಸಿ ಮನೆಗೆ ಮರಳಬೇಕು. ಹಬ್ಬದ ಸಮಾರಂಭ, ಹೊಸ ವರ್ಷದ ಸಮಾರಂಭ, ಆಚರಣೆ ಎಂದು ಅನವಶ್ಯಕವಾಗಿ ಗುಂಪುಗೂಡುವುದನ್ನು ನಿಷೇಧಿಸಲಾಗಿದೆ. ಜನರ ಆರೋಗ್ಯದ ಹಿತದೃಷ್ಟಿಯಿಂದ ಈ ನಿರ್ಧಾರ ತೆಗೆದುಕೊಂಡಿದ್ದು, ಇದಕ್ಕೆ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ತುರ್ತು ಸೇವೆಗಳು ಹೇಗಿರಬೇಕು, ಯಾವೆಲ್ಲ ಚಟುವಟಿಕೆಗಳಿಗೆ ಅವಕಾಶ ನೀಡಲಾಗುತ್ತದೆ ಎಂಬುದರ ಬಗ್ಗೆ ಮಾರ್ಗಸೂಚಿಯಲ್ಲಿ ವಿವರವಾಗಿ ತಿಳಿಸಲಾಗುತ್ತದೆ ಎಂದು ವಿವರಿಸಿದರು.

ಆರೋಗ್ಯ ಇಲಾಖೆಯಿಂದ ನಿಗಾ

ನವೆಂಬರ್ 25 ರಿಂದ ಡಿಸೆಂಬರ್ 22 ರವರೆಗೆ ರಾಜ್ಯಕ್ಕೆ ಯು.ಕೆ.ಯಿಂದ ಬಂದವರ ಮೇಲೆ ಆರೋಗ್ಯ ಇಲಾಖೆಯ ಸಿಬ್ಬಂದಿ ನಿಗಾ ಇರಿಸಲಿದ್ದಾರೆ. ಯು.ಕೆ.ಯಿಂದ ಬಂದವರು ಕಡ್ಡಾಯವಾಗಿ 28 ದಿನಗಳ ಕಾಲ ಕ್ವಾರಂಟೈನ್ ಗೆ ಒಳಗಾಗಬೇಕು. ಮೊದಲ 14 ದಿನಗಳ ಕಾಲ ಅವರ ಮೇಲೆ ಆರೋಗ್ಯ ಇಲಾಖೆಯ ಸಿಬ್ಬಂದಿ ನಿಗಾ ಇರಿಸುತ್ತಾರೆ. ನಂತರದ 14 ದಿನ ಅವರೇ ಸ್ವತಃ ನಿಗಾ ಇರಿಸಿಕೊಳ್ಳಬೇಕು ಎಂದು ವಿವರಿಸಿದರು.

ನವೆಂಬರ್ 25 ರಿಂದ ಡಿಸೆಂಬರ್ 22 ರವರೆಗೆ ಯು.ಕೆ.ಯಿಂದ ರಾಜ್ಯಕ್ಕೆ 2,500 ಜನರು ಬಂದಿದ್ದಾರೆ. ಪ್ರತಿ ದಿನ ಯು.ಕೆ.ಯಿಂದ ಎರಡೇ ವಿಮಾನ ಬಂದಿದೆ. ಯಾವ ವಿಮಾನದಲ್ಲಿ ಎಷ್ಟು ಜನ ಬಂದಿದ್ದಾರೆ ಎಂಬ ಮಾಹಿತಿಯನ್ನೂ ಕೂಡ ನೀಡಲಾಗುವುದು. ಇಷ್ಟೂ ಪ್ರಯಾಣಿಕರ ಮೇಲೆ ನಿಗಾ ಇರಿಸಲಾಗುವುದು. ಯಾರಲ್ಲಾದರೂ ರೋಗ ಲಕ್ಷಣ ಕಂಡುಬಂದರೆ ಆರ್ ಟಿಪಿಸಿಆರ್ ಪರೀಕ್ಷೆ ಮಾಡಿಸಲಾಗುವುದು ಎಂದು ತಿಳಿಸಿದರು.

ನಿಮ್ಹಾನ್ಸ್, ಭಾರತೀಯ ವಿಜ್ಞಾನ ಸಂಸ್ಥೆ ಸೇರಿದಂತೆ ವೈರಸ್ ಬಗ್ಗೆ ಅಧ್ಯಯನ ಮಾಡುವ ನಾಲ್ಕು ಸಂಸ್ಥೆಗಳು ಬೆಂಗಳೂರಿನಲ್ಲಿವೆ. ಪಾಸಿಟಿವ್ ಆದವರ ಮಾದರಿಯನ್ನು ಈ ಸಂಸ್ಥೆಗಳಿಗೆ ನೀಡಿ ಹೊಸ ಪ್ರಭೇದದ ವೈರಸ್ ಬಗ್ಗೆ ಅಧ್ಯಯನ ಮಾಡಲಾಗುವುದು. ಅಗತ್ಯವಿದ್ದರೆ ಜೀನ್ ಸೀಕ್ವೆನ್ಸ್ ಅಧ್ಯಯನ ಮಾಡಲಾಗುವುದು ಎಂದು ಹೇಳಿದರು.

*ತಪ್ಪು ಮಾಹಿತಿ ನೀಡಬೇಡಿ*

*ರಾಜಕೀಯ ಮುಖಂಡರೊಬ್ಬರು ಯು.ಕೆ.ಯಿಂದ 14 ಸಾವಿರ ಜನರು ಬಂದಿದ್ದಾರೆ ಎಂದು ತಪ್ಪಾಗಿ ಹೇಳಿದ್ದಾರೆ. ನಮ್ಮ ಸರ್ಕಾರಕ್ಕೆ ಸಾವಿನ ಸಂಖ್ಯೆ, ಸೋಂಕಿತರ ಸಂಖ್ಯೆ, ಪ್ರಯಾಣಿಕರ ಸಂಖ್ಯೆಯನ್ನು ಮರೆಮಾಚುವ ಅಗತ್ಯವಿಲ್ಲ. ಅಂಕಿ ಸಂಖ್ಯೆಯನ್ನು ಮುಚ್ಚಿಡುವ ಯಾವುದೇ ಅವಶ್ಯಕತೆ ಇಲ್ಲ. ಯಾವುದೇ ರಾಜಕೀಯ ಮುಖಂಡರು ಸರಿಯಾದ ಮಾಹಿತಿ ಕಲೆಹಾಕಿ ಮಾತನಾಡಬೇಕು ಎಂದು ಸಚಿವ ಡಾ.ಕೆ.ಸುಧಾಕರ್ ಹೇಳಿದರು.*

*ಇದು ಅನಿವಾರ್ಯ*

ಕರ್ಫ್ಯೂ ನಿರ್ಧಾರಕ್ಕೆ ಬಾರ್ ಮತ್ತು ಹೋಟೆಲ್ ಮಾಲೀಕರು ಆಕ್ಷೇಪ ವ್ಯಕ್ತಪಡಿಸಿರುವುದಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಸಚಿವ ಡಾ.ಕೆ.ಸುಧಾಕರ್, ರಾತ್ರಿ ಕರ್ಫ್ಯೂ ನಿರ್ಧಾರವನ್ನು ಸಂತೋಷದಿಂದೇನೂ ತೆಗೆದುಕೊಂಡಿಲ್ಲ. ಬಹಳ ಅನಿವಾರ್ಯ, ಅವಶ್ಯಕತೆ ಇರುವುದರಿಂದ ಹಾಗೂ ಜನರ ಆರೋಗ್ಯದ ಹಿತದೃಷ್ಟಿಯಿಂದ ಈ ತೀರ್ಮಾನಕ್ಕೆ ಬರಲಾಗಿದೆ. ರಾತ್ರಿ 10 ಗಂಟೆ ನಂತರ ಕರ್ಫ್ಯೂ ವಿಧಿಸಲಾಗಿದೆಯೇ ಹೊರತು ಅದಕ್ಕೂ ಮುಂಚೆ ಯಾವುದೇ

ಚಟುವಟಿಕೆ ನಿಷೇಧ ಮಾಡಿಲ್ಲ. ಕೃಷಿ ಚಟುವಟಿಕೆಗಳಿಗೆ, ಸರಕು ಸಾಗಣಿಕೆಗೆ, ಮಾರಾಟಕ್ಕೆ ಯಾವುದೇ ತೊಂದರೆ ಆಗುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಈ ವಿಚಾರದಲ್ಲಿ ಎಲ್ಲರಿಗೂ ಜವಾಬ್ದಾರಿ ಇದೆ. ಕೇವಲ ಹಣ ಸಂಪಾದನೆ ಹಾಗೂ ಆರ್ಥಿಕ ಚಟುವಟಿಕೆಯನ್ನು ಮಾತ್ರ ನೋಡದೆ, ಜನರ ಸುರಕ್ಷತೆ ಹಾಗೂ ಆರೋಗ್ಯವನ್ನು ಕೂಡ ನೋಡಬೇಕು. ಕೇವಲ ಒಂಬತ್ತು ದಿನಗಳು ಮಾತ್ರ ಈ ಕ್ರಮ ಕೈಗೊಳ್ಳಲಾಗಿದೆ. ಈ ಅವಧಿಯಲ್ಲಿ ಹೊಸ ಪ್ರಭೇದದ ಬಗ್ಗೆ ಅಧ್ಯಯನ ನಡೆಸಲು ಅನುಕೂಲವಾಗಲಿದೆ ಎಂದರು.

ಬೆಂಗಳೂರಿನ ಆರ್ಚ್ ಬಿಷಪ್ ನವರು ನನಗೆ ಮಾಹಿತಿ ಕಳುಹಿಸಿದ್ದಾರೆ. ಯಾವುದೇ ಸಮಾರಂಭ ಮಾಡುವುದಿಲ್ಲ ಎಂದು ಅವರೇ ಹೇಳಿದ್ದಾರೆ. ಅವರಿಗೆ ನಾನು ಅಭಿನಂದನೆ ಸಲ್ಲಿಸಿ ಪತ್ರ ಬರೆದಿದ್ದೇನೆ ಎಂದರು.

## Night Curfew imposed as per the suggestions of Technical Advisory Committee: Health & Medical Education Minister Dr.K.Sudhakar

**Bengaluru, December 23 (Karnataka Information)**

Health department to keep track on UK returnees in last 14 days Vigil on 2,500 passengers to collect more information, Night curfew has been imposed in the state as per the suggestions given by the technical advisory committee. Meanwhile health department is keeping vigil on passengers returned from United Kingdom said Heath & Medical Education Minister Dr.K.Sudhakar.

Dr Sudhakar held a detailed discussion with the members of technical advisory committee earlier this morning. The meeting was significant on the backdrop of reports of a new strain of Corona virus found in the UK. Later Dr Sudhakar met Chief Minister B.S.Yediyurappa at his offcial residence 'Krishna' and briefed the CM on the suggestions provided by experts in the meeting.

Speaking to the media after CM’s briefing Minister said that, a decision has been taken to impose night curfew in the state. Night curfew will be imposed starting today from 10 PM to 6 AM till January 2 2021. People are advised to wind up their activities by 10 PM. Unnecessary gatherings and celebrations are prohibited. The Minister requested the citizens to cooperate as the decision is taken in the interest of public health and safety.
d
Detailed guidelines will be out soon regarding the permitted activities and restrictions, he said.

*Health Department to keep vigil*

Health department officials will keep vigilance on those returned from UK from November 25 to December 22. They will undergo 28 days compulsory quarantine.

Health officials will take care of their health for initial 14 days. After that individuals have to volunatily restrict themselves at home, he said.

2,500 passengers have arrived in the state during this period. 2 flights/day arrived during this period. Details of the passengers are available and every single passenger will be kept under strict vigilance. RTPCR test will be conducted if symptomatic. The Minister said.

We have 4 elite institutes in Bengaluru including IISc and NIMHANS to study genetic sequence of the virus. Sample of the positive persons will be given to these institutions for study and research will be conducted on new variant of the virus. Said Dr.Sudhakar.

*Political leadsrs should get their facts right*

*A political leader has issued a statement that 14,000 passengers have arrived from UK. This is completely baseless. There is no need for the government to hide the data. Politicians should get their facts right before they speak, Dr.Sudhakar said*

*This is inevitable*
Responding to the objections raised by Bar and Hotel owners association for night curfew, Dr Sudhakar clarified that night curfew decision is not a happy decision but it is inevitable. considering the public health and safety curfew has been imposed. There is no restrictions for any activities before 10 PM and all agricultural activities including transportation and marketing of farm produce will not be affected, he said.

Everyone should be sensible and act responsibly in this matter, we should not consider only financial implications, public health is paramount. Curfew is for only 9 days, it will help us to study the genetic sequence of the new mutant during this period, said Dr.K.Sudhakar. Arch Bishop of Bengaluru has conveyed a message to me that they are not conducting any celebrations this time. I have written a letter thanking Arch Bishop for this gesture, said the minister.

## “ಸುಸ್ಥಿರ ಅಭಿವೃದ್ಧಿ ಗುರಿಗಳ ಮುನ್ನೋಟ - 2030” ಬಿಡುಗಡೆ

ಬೆಂಗಳೂರು, ಡಿಸೆಂಬರ್ 23 (ಕರ್ನಾಟಕ ವಾರ್ತೆ):

ಸುಸ್ಥಿರ ಅಭಿವೃದ್ಧಿ ಯೋಜನೆಯಡಿ 17 ಗುರಿಗಳು ಬರಲಿದ್ದು ಹೆಚ್ಚು ಸುಧಾರಣೆಯ ಅಗತ್ಯವಿರುವ ಪ್ರದೇಶ ಹಾಗೂ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಮುಂದಿನ ಆಯವ್ಯಯದಲ್ಲಿ ಅಗತ್ಯ ಅನುದಾನ ಒದಗಿಸಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ತಿಳಿಸಿದರು.

ಇಂದು ಮುಖ್ಯಮಂತ್ರಿಗಳ ಗೃಹ ಕಛೇರಿ ಕೃಷ್ಣದಲ್ಲಿ ಏರ್ಪಡಿಸಿದ್ದ ಯೋಜನಾ ಇಲಾಖೆ ಸಿದ್ಧಪಡಿಸಿರುವ "ಸುಸ್ಥಿರ ಅಭಿವೃದ್ಧಿ ಗುರಿಗಳ ಮುನ್ನೋಟ- 2030"ರ ಕ್ರಿಯಾ ಯೋಜನೆಯನ್ನು ಬಿಡುಗಡೆ ಮಾಡಿ ಮಾತನಾಡಿದ ಮುಖ್ಯಮಂತ್ರಿಗಳು ವಿಶ್ವಸಂಸ್ಥೆಯು ನೀಡಿರುವ ಸುಸ್ಥಿರ ಅಭಿವೃದ್ಧಿಯು 17 ಗುರಿಗಳ ಸಾಧನೆಯಲ್ಲಿ ರಾಜ್ಯವು 6ನೇ ಸ್ಥಾನದಲ್ಲಿದೆ. ಇದನ್ನು ಮೊದಲ ಸ್ಥಾನಕ್ಕೆ ತರಲು ಅಧಿಕಾರಿಗಳು ಕೆಲಸ ಮಾಡಬೇಕು ಸರ್ಕಾರ ಅಗತ್ಯ ಇರುವ ಅನುದಾನ ಒದಗಿಸಲು ಕ್ರಮ ಕೈಗೊಳ್ಳಲಿದೆ ಎಂದರು.

ಮುಂದಿನ 10 ವರ್ಷಗಳ ಕಾಲ ರಾಜ್ಯದಲ್ಲಿ ಸುಸ್ಥಿರ ಅಭಿವೃದ್ಧಿಯನ್ನು ಖಾತರಿಪಡಿಸಲು ಮತ್ತು ಅಭಿವೃದ್ಧಿ ಪಥದಲ್ಲಿ ಮುನ್ನಡೆಸಲು ಪೂರಕವಾದ ಮಾರ್ಗಸೂಚಿ ಯೋಜನೆಗಳನ್ನು ಈ ಕ್ರಿಯಾ ಯೋಜನೆ ತಿಳಿಸುತ್ತದೆ. ಎಲ್ಲರನ್ನೂ ಒಳಗೊಳ್ಳುವ ಅಭಿವೃದ್ಧಿ ದೃಷ್ಟಿ ಕೋನವನ್ನು ಅನುಷ್ಠಾನಕ್ಕೆ ತರಲು ಇದು ಸಹಕಾರಿಯಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ರಾಜ್ಯದ ಎಲ್ಲಾ ಜನರಿಗೆ ಉತ್ತಮ ಜೀವನೋಪಾಯ, ಸ್ವಚ್ಛ ಪರಿಸರ, ಉತ್ತಮ ಆರೋಗ್ಯ ಗುಣಮಟ್ಟದ ಶಿಕ್ಷಣ, ಪೌಷ್ಠಿಕ ಆಹಾರ ಇತ್ಯಾದಿ ಗುರಿಗಳನ್ನು ತಲುಪಲು ಈ ಕ್ರಿಯಾಯೋಜನೆ ಒತ್ತು ನೀಡುತ್ತದೆ.

2010ರಲ್ಲಿ ನಾನು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಚುಟುಕ ದೂರದೃಷ್ಠಿ ವರದಿಯನ್ನು ತಯಾರಿಸಲಾಗಿತ್ತು ಅದರ ಆಧಾರದಲ್ಲಿ ಜನತೆಯ ಅಭಿವೃದ್ಧಿ ಆಶೋತ್ತರಗಳನ್ನು ಮತ್ತು ಸಾಧನೆಯ ಮಾರ್ಗವನ್ನು ಹೇಗೆ ರೂಪಿಸಿಕೊಳ್ಳಬೇಕು ಎಂಬ ವಿವರವಾದ ಕ್ರಿಯಾಯೋಜನೆ ಒಳಗೊಂಡಿದೆ ಎಂದರು.

ಸುಸ್ಥಿರ ಯೋಜನೆಯಡಿ ನಾಡಿನ ಎಲ್ಲಾ ಹಂತದ ಜನಸಮುದಾಯಕ್ಕೆ ವಿಶೇಷವಾಗಿ ವಿದ್ಯಾರ್ಥಿ, ಯುವಜನರಿಗೆ ತಲುಪುವಂತೆ ನೋಡಿಕೊಳ್ಳಬೇಕು. ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಯಶಸ್ವಿಯಾಗಿ ಸಾರಿಸುವ ಮೂಲಕ ಶಾಂತಿ–ಸಹಬಾಳ್ವೆ, ಸಮತೆ–ಸಹೋದರತ್ವದ ನೆಲೆಯಲ್ಲಿ ರಾಜ್ಯದ ಸಮಗ್ರ ಅಭಿವೃದ್ಧಿ ಸಾರಿಸಿ ಸಮೃದ್ಧ ಕರ್ನಾಟಕ ನಿರ್ಮಿಸುವ ದಿಶೆಯಲ್ಲಿ ನಾವೆಲ್ಲ ಕೆಲಸ ಮಾಡೋಣ.

ಕರ್ನಾಟಕ ರಾಜ್ಯ ಯೋಜನಾ ಮಂಡಳಿ ಉಪಾಧ್ಯಕ್ಷ ಬಿ.ಜೆ. ಪುಟ್ಟಸ್ವಾಮಿ ಅವರು ಮಾತನಾಡಿ ಸುಸ್ಥಿರ ಯೋಜನೆಯಡಿ ರಾಜ್ಯ ಹೆಚ್ಚು ಶ್ರೇಯಾಂಕ ಪಡೆಯಲಿ, ಕರ್ನಾಟಕಕ್ಕಿಂತ ಉತ್ತಮ ಶ್ರೇಯಾಂಕ ಹೊಂದಿರುವ ಕೇರಳ, ಗುಜರಾತ್ ಮತ್ತು ಇತರ ರಾಜ್ಯಗಳಿಗೆ ಭೇಟಿ ನೀಡಿದ್ದು, ಆ ರಾಜ್ಯಗಳಲ್ಲಿ ಸುಸ್ಥಿರ ಅಭಿವೃದ್ಧಿ ಗುರಿ 2030 ಸಾಧನೆಗೆ ಕೈಗೊಂಡಿರುವ ಕ್ರಮಗಳ

ಕುರಿತು ಅಧ್ಯಯನ ನಡೆಸಲಾಗಿದೆ. ಇದರ ವಿವರಗಳನ್ನು ಮುಂದಿನ ಯೋಜನಾ ಮಂಡಳಿಯ ಸಭೆಯಲ್ಲಿ ತಿಳಿಸುವುದಾಗಿ ಹೇಳಿದರು.

ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ. ಎಂ. ವಿಜಯಭಾಸ್ಕರ್ ಅವರು ಮಾತಾನಾಡಿ ಕೇಂದ್ರ ಸರ್ಕಾರದ ನೀತಿ ಆಯೋಗದ ಸೂಚನೆಯಂತೆ ಸುಸ್ಥಿರ ಅಭಿವೃದ್ಧಿಯ 17 ಅಂಶಗಳ ಗುರಿ ಸಾಧನೆಗೆ ನಿವೃತ್ತ ಹಿರಿಯ ಅಧಿಕಾರಿಗಳ ನೇತೃತ್ವದಲ್ಲಿ ಪ್ರತ್ಯೇಕ ತಂಡಗಳನ್ನು ರಚಿಸಲಾಗಿತ್ತು. ಅವರು ನೀಡಿರುವ ಸಲಹೆ ಮತ್ತು ಸೂಚನೆಗಳನ್ನು ಆಯವ್ಯಯದಲ್ಲಿ ಅಳವಡಿಸುವ ಸಂಬಂಧ ಆರ್ಥಿಕ ಇಲಾಖೆಯೊಂದಿಗೆ ಚರ್ಚಿಸಿ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಪ್ರಸ್ತಾವಿಕವಾಗಿ ಮಾತನಾಡಿದ ಯೋಜನಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಡಾ: ಶಾಲಿನಿ ರಜನೀಶ್ ಅವರು ನೀತಿ ಆಯೋಗ ಬಿಡುಗಡೆ ಮಾಡಿದ 2019 ಎಸ್.ಡಿ.ಜಿ. ಇಂಡಿಯಾ ಇಂಡೆಕ್ಸ್‌ನಲ್ಲಿ ಕರ್ನಾಟಕ 66 ಅಂಕಗಳೊಂದಿಗೆ 6 ನೇ ಸ್ಥಾನದಲ್ಲಿದೆ. ಕಡಿಮೆ ಅಂಕ ಪಡೆದಿರುವ ಅಂಶಗಳ ಗುರಿಗಳನ್ನು ಸಾಧಿಸಲು ಆದ್ಯತೆ ನೀಡುವ ಮೂಲಕ ಕರ್ನಾಟಕ ರಾಜ್ಯ ದೇಶದಲ್ಲಿ ಉತ್ತಮ ಶ್ರೇಯಾಂಕವನ್ನು ಪಡೆಯಲು ಉತ್ತಮವಾಗಿ ಕೆಲಸ ಮಾಡಲಾಗುವುದು ಎಂದು ತಿಳಿಸಿದರು.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವಿಕುಮಾರ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತೆ ಶ್ರೀಮತಿ ವಂದಿತಾಶರ್ಮ, ಮುಖ್ಯಮಂತ್ರಿಯವರ ಕಾರ್ಯದರ್ಶಿ ಸೆಲ್ವಕುಮಾರ್, ಮುಖ್ಯಮಂತ್ರಿ ಅವರ ಸಲಹೆಗಾರರಾದ ಲಕ್ಷ್ಮೀನಾರಾಯಣ ಸೇರಿದಂತೆ ಹಿರಿಯ ತಜ್ಞರು ಮತ್ತು ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಛಾಯಾಚಿತ್ರ ಶೀರ್ಷಿಕೆ)

**ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಇಂದು ಸುಸ್ಥಿರ ಅಭಿವೃದ್ಧಿ ಗುರಿಗಳ ಮುನ್ನೋಟ - 2030 ಕರ್ನಾಟಕದ ಕಾರ್ಯ ತಂತ್ರಗಳು ಮತ್ತು ಕ್ರಿಯಾ ಯೋಜನೆ ವರದಿಯನ್ನು ಬಿಡುಗಡೆ ಮಾಡಿದರು.**

ರಾಜ್ಯ ಯೋಜನಾ ಮಂಡಳಿ ಉಪಾಧ್ಯಕ್ಷ ಬಿ.ಜೆ.ಪುಟ್ಟಸ್ವಾಮಿ, ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್, ಯೋಜನೆ , ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಡಾ: ಶಾಲಿನಿ ರಜನೀಶ್, ಅಭಿವೃದ್ಧಿ ಆಯುಕ್ತರಾದ ವಂದಿತಾ ಶರ್ಮ ಮತ್ತಿತರರು ಉಪಸ್ಥಿತರಿದ್ದರು.

ಛಾಯಾಚಿತ್ರ ಲಗತ್ತಿಸಿದೆ)

## ತಂಬಾಕು ಮುಕ್ತ ಕರ್ನಾಟಕ –2025 : ಸಮಾಲೋಚನಾ ಕಾರ್ಯಾಗಾರ

ಬೆಂಗಳೂರು, ಡಿಸೆಂಬರ್ 23(ಕರ್ನಾಟಕ ವಾರ್ತೆ): ರಾಜ್ಯದಲ್ಲಿ ತಂಬಾಕು ಬಳಕೆಯಿಂದಾಗುವು ಆರೋಗ್ಯ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸುವುದು ಹಾಗೂ ಇನ್ನೂ ಐದು ವರ್ಷಗಳಲ್ಲಿ ತಂಬಾಕು ಬಳಕೆಯನ್ನು ಕಡಿಮೆ ಮಾಡುವುದು ಮತ್ತು 18 ವಯಸ್ಸು ಮೇಲ್ಪಟ್ಟವರು ಬಳಸಲು ಇರುವ ಅನುಮತಿಯನ್ನು 25 ವಯಸ್ಸಿಗೆ ಮಾರ್ಪಡಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕಾದ ಕುರಿತು ಸಲಹೆ ಸೂಚನೆಗಳನ್ನು ಪಡೆಯಲು ತಂಬಾಕು ಮುಕ್ತ ಕರ್ನಾಟಕ–2025 ಸಮಾಲೋಚನಾ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಡಾ.ಎಂ.ಸೆಲ್ವರಾಜನ್ ಅವರು ತಿಳಿಸಿದರು.

ಇಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆವತಿಯಿಂದ ನಗರದ ಐ.ಎ.ಎಸ್ ಅಧಿಕಾರಿಗಳ ಸಂಘದ ಆವರದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತಾನಾಡಿದ ಅವರು 2016–17 ರಲ್ಲಿ ನಡೆಸಿದ ಎರಡನೇ ಜಾಗತಿಕ ವಯಸ್ಕರ ತಂಬಾಕು ಸಮೀಕ್ಷೆ (GATS)ಯ ಪ್ರಕಾರ, ಭಾರತದಲ್ಲಿ (ರಾಷ್ಟ್ರೀಯ ಮಟ್ಟದಲ್ರಲಿ) ಶೇ. 28.6ರಷ್ಟು ವಯಸ್ಕರು ತಂಬಾಕು ಉತ್ಪನ್ನಗಳನ್ನು ಬಳಸುತ್ತಿದ್ದರೆ, ಕರ್ನಟಕ ರಾಜ್ಯದಲ್ಲಿ ಶೇ. 22.8 ರಷ್ಟು ವಯಸ್ಕರು ಬಳಸುತ್ತಿದ್ದಾರೆ. ಅಂದರೆ ರಾಜ್ಯದ ಒಟ್ಟು 6.11 ಕೋಟಿ ಜನಸಂಖ್ಯೆಯಲ್ಲಿ ಸುಮಾರು ಶೇ.1.3 ಕೋಟಿ (2011 ರ ಜನಗಣತಿಯ ಪ್ರಕಾರ) ಜನರು ತಂಬಾಕು ಉತ್ತಪನ್ನಗಳನ್ನು ಬಳಸುತ್ತಿದ್ದಾರೆ ಎಂದರು.

ಅವರಲ್ಲಿ ಶೆ.12 ರಷ್ಟು ಜನರು ಧೂಮಪಾನಿಗಳಾಗಿದ್ದರೆ, ಶೇ.19 ರಷ್ಟು ಜನರು ವಿವಿಧ ತಂಬಾಕು ಉತ್ಪನ್ನಗಳ ಬಳಕೆದಾರರಾಗಿದ್ದಾರೆ. ಈ ಯವಕರಲ್ಲಿ ಹೆಚ್ಚಿನವರು ಸುಮಾರು 15 ವರ್ಷ ಅಥವಾ ಅದಕ್ಕಿಂತ ಕಡಿಮ ವಯಸ್ಸಿನಲ್ಲಿತೇ ತಂಬಾಕಿನಿಂದಾಗಿವ ಅನಾರೋಗ್ಯ ಮತ್ತು ಮಾರಣಾಂತಿಕ ಪರಿಣಾಮಗಳ ಬಗ್ಗೆ ಗಮನ ಹರಿಸದೆ ಅದನ್ನು ಬಳಸಲು ಪ್ರಾರಂಭಿಸುತ್ತಾರೆ. ಉಸಿರಾಟದ ಕಾಯಿಲೆಗಳ ಸಂಖ್ಯೆ ಮತ್ತು ತಿವ್ರತೆಯ ಹೆಚ್ಚಳ, ದಐಹಿಕ ಸಾಮರ್ಥ್ಯ ಕ್ಷೀಣತೆ ಮತ್ತು ಶ್ವಾಸಕೋಶದ ಬೆಳವಣಿಗೆ ಮತ್ತು ಕಾರ್ಯಚಟಿವಟಿಕೆಯ ಮೇಲೆ ಸಂಭವನೀಯ ಪರಿಣಾಮಗಳು ಯುವಕರು ಎದುರಿಸುತ್ತಿರುವ ಪ್ರಮುಖ ಆರೋಗ್ಯ ಸಮಸ್ಯೆಗಳಲ್ಲಿ ಕೆಲವಾಗಿವೆ.

ರಾಜ್ಯ ಸರ್ಕಾರದ ಪ್ರಯತ್ನಗಳು ಗಮನಾರ್ಹ ಸಕಾರಾತ್ಮಕ ಫಲಿತಾಂಶಗಳನ್ನು ನೀಡುತ್ತಿವೆ ಉಂಖಿಖ 1(2009 ರಲ್ಲಿ ನಡೆಸಿದ ) ಮತ್ತು ಉಂಖಿಖ 2 (2016–17 ರಲ್ಲಿ ನಡೆಸಿದ ) ಸಮೀಕ್ಷೆಗಳ ಪ್ರಕಾರ 15 ರಿಂದ 17 ವರ್ಷದೊಳಗಿನ ವಯಸ್ಕರಲ್ಲಿ ತಂಬಾಕು ಸೇವನೆಯ ಹರಡುವಿಕೆಯು 6 ವರ್ಷಗ ಅವಧಿಯಲ್ಲಿ ಶೇ. 6.8 ರಿಂದ ಶೇ. 3.7 ಕ್ಕೆ ಇಳಿದಿದೆ.

ತಂಬಾಕು ಉತ್ಪನ್ನಗಳನ್ನು ಬಳಸುವ ಯುವಕರ ಸಂಖ್ಯೆಯಲ್ಲಿ ಒಂದಿಷ್ಟು ಇಳಿಕೆ ಕಂಡು ಬಂದಿದ್ದರೂ, ಯುವ ಜನತೆ ತಂಬಾಕು ಉತ್ಪನ್ನಗಳಿಂದ ವಿಮುಖರಾಗಲು ಇನ್ನಷ್ಟು ಪರಿಣಾಮಕಾರಿಯಾಗಿ ತಂಬಾಕು ನಿಯಂತ್ರಣ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಬೇಕಾಗಿದೆ. ಏಕೆಂದರೆ 2011 ರ ಜನಗಣತಿಯ ಪ್ರಕಾರ ರಾಜ್ಯದಲ್ಲಿ ನಾಲ್ಕು ವಯಸ್ಕರಲ್ಲಿ ಒಬ್ಬರು ಸೆಕೆಂಡ್ ಹ್ಯಾಂಡ್ (ಪರೋಕ್ಷ) ಧೂಮಪಾನಕ್ಕೆ ಒಳಗಾಗುತ್ತಿದ್ದಾರೆ ಮತ್ತು 15 ರಿಂದ 17 ವರ್ಷ ವಯಸ್ಸಿನ ಏಳು ಮಕ್ಕಳಲ್ಲಿ ಒಬ್ಬರು ತಂಬಾಕು ಉತ್ಪನ್ನಗಳನ್ನು ಬಳಸುತ್ತಾರೆ. ಹಾಗೆಯೇ 2019-20 ರ ಅವಧಿಯಲ್ಲಿ ನಡೆಸಿದ ಇತ್ತೀಚಿನ ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆ (NFHS) ಯ ಪ್ರಕಾರ, ಕರ್ನಾಟಕದಲ್ಲಿ 15 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಶೇ. 85 ರಷ್ಟು ಮಹಿಳೆಯರು ಮತ್ತು ಶೇ 27.1 ರಷ್ಟು ಪುರುಷರು ತಂಬಾಕು ಉತ್ಪನ್ನಗಳನ್ನು ಬಳಸುತ್ತಿದ್ದಾರೆ.

ತಂಬಾಕು ಬಳಕೆ ಐದು ಶತಮಾನಗಳಿಗಿಂತಲೂ ಹೆಚ್ಚು ಕಾಲದಿಂದ ಜಗತ್ತಿನಲ್ಲಿ ಪ್ರಚಲಿತದಲ್ಲಿದೆ. ಕೆಲವು ಕಾಯಿಲೆಗಿಗೆ ಚಿಕಿತ್ಸೆ ನೀಡಲು ಔಷಧೀಯ ಪದಾರ್ಥವಾಗಿ ಬೆಳಕಿಗೆ ಬಂದ ತಂಬಾಕು, ವರ್ಷಗಳು ಕಳೆದಂತೆ ಹೃದಯ, ಯಕೃತ್ತು ಮತ್ತು ಶ್ವಾಸಕೋಶಕ್ಕೆ ಸಂಬಂಧಿಸಿದ ಅನೇಕ ಕಾಯಿಲೆಗಳಿಗೆ ಒಂದು ಪ್ರಮುಖ ಕಾರಣ ಅಥವಾ ಅಪಾಯಕಾರಿ ಅಂಶವಾಗಿಬಿಟ್ಟಿದೆ. ಇದು ಮಾನವ ಜೀವಗಳನ್ನು ಉಳಿಸಲು ಬಳಕೆಗೆ ಬಂದಿತ್ತು. ಆದರೆ ದುರದೃಷ್ಟವಶಾತ್ ಮಾನವ ಜೀವಗಳಿಗೆ ಹಾನಿ ಮಾಡಲು ಒಂದು ಕಾರಣವಾಗಿ ಪರಿವರ್ತನೆಯಾಗಿ ಬಿಟ್ಟಿದೆ. ಹಾಗಿದ್ದರೂ ಅನೇಕ ಅಭಿವೃದ್ಧಿ ಹೊಂದುತ್ತಿರುವ ಮತ್ತು ಕಡಿಮೆ ಅಭಿವೃದ್ಧಿ ಹೊಂದಿದ ದೇಶಗಳ ಹಾಗೆ ಇದನ್ನು ಭಾರತದಲ್ಲಿಯೂ ವ್ಯಾಪಕವಾಗಿ ಧೂಮಪಾನ ಮತ್ತು ಜಗಿಯುವ ಉತ್ಪನ್ನವಾಗಿ ಬಳಸಲಾಗುತ್ತದೆ.

ದೇಶದಲ್ಲಿ ತಂಬಾಕು ನಿಯಂತ್ರಣಕ್ಕೆ ಸಂಬಂಧಿಸಿದ ಭಾರತ ಸರ್ಕಾರದ ನಿರಂತರ ಪ್ರಯತ್ನಗಳೊಂದಿಗೆ ಕೈಜೋಡಿಸಿ, ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಜನರನ್ನು ಅದರಲ್ಲೂ ವಿಶೇಷವಾಗಿ ಯುವಕರನ್ನು ತಂಬಾಕು ಬಳಕೆಯಿಂದ ದೂರವಿಡುವ ಸಲುವಾಗಿ ರಾಜ್ಯದ ಸ್ಥಿತಿಗತಿಗಳನ್ನಾಧರಿಸಿ ಕಾಲಕಾಲಕ್ಕೆ ಸಂಬಂಧಿಸಿದ ಕಾಯ್ದೆ ಮತ್ತು ಶಾಸನಗಳನ್ನು ತಿದ್ದುಪಡಿ ಮಾಡುವ ಮೂಲಕ ತಂಬಾಕು ನಿಯಂತ್ರಣ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡುತ್ತಾ ಬರುತ್ತಿದೆ.

ಯುವಕರು ಯಾವುದೇ ರಾಷ್ಟ್ರದ ಶ್ರೇಷ್ಠ ಸಂಪತ್ತು ಮತ್ತು ಶಕ್ತಿಯಾಗಿರುವುದರಿಂದ, ಅವರ ಗುಣಮಟ್ಟವು ರಾಷ್ಟ್ರದ ಭವಿಷ್ಯವನ್ನು ನಿರ್ಧರಿಸುತ್ತದೆ. ಅಂತೆಯೇ, ಗಂಭೀರ ಮತ್ತು ಸಮಗ್ರವಾದ ಯೋಜನೆಯನ್ನು ರೂಪಿಸಿ ರಾಜ್ಯದಾದ್ಯಂತ ಜಾರಿಗೆ ತರಬೇಕಾದ ಸೂಕ್ತ ಸಮಯ ಇದು. ಇದರಿಂದಾಗಿ ಕಿರಿಯ ವಯಸ್ಸಿನಲ್ಲಿ ಯುವಕರು ಹಾನಿಕಾರಕ ತಂಬಾಕು ಉತ್ಪನ್ನಗಳನ್ನು ಬಳಸುವತ್ತ ತಮ್ಮ ಗಮನವನ್ನು ಹರಿಸದೆ ಅವರ ಅಮೂಲ್ಯ ಸಮಯ, ಶಕ್ತಿ ಮತ್ತು ವಯಸ್ಸನ್ನು ಆರೋಗ್ಯಕರ ದೈಹಿಕ ಮತ್ತು ಮಾನಸಿಕ ಆರೋಗ್ಯ ಬೆಳವಣಿಗೆಗೆ ಬಳಸಬೇಕಾಗಿದೆ. ಇದು ಅವರನ್ನು ಯಾವುದೇ ತಂಬಾಕು ಬಳಕೆಯ ಸಂಬಂಧಿದ ಕಾಯಿಲೆಗಳಲ್ಲಿದೆ ದೀರ್ಘಾಯುಷ್ಯವನ್ನು ಹೊಂದುವಂತೆ ಮಾಡುತ್ತದೆ.

ಈ ಮೇಲಿನ ಸನ್ನಿವೇಶವನ್ನು ಪರಿಗಣಿಸಿ, ಮತ್ತು 2007 ಜನಿಸಿದ ಮಗುವಿಗೆ 2025 ರ ವೇಳೆಗೆ ರಾಜ್ಯದಲ್ಲಿ ತಂಬಾಕು ಉತ್ಪನ್ನಗಳು ದೊರೆಯಬಾರದು ಎಂಬ ಪ್ರಸ್ತಾವನೆಯನ್ನಿರಿಸಿಕೊಂಡು 23 ನೇ ಡಿಸೆಂಬರ್ 2020 ರಂದು "ತಂಬಾಕು ಮುಕ್ತ ಕರ್ನಾಟಕ -2025 ಎಂಬ ಒಂದು ರಾಜ್ಯಮಟ್ಟದ ಸಮಾಲೋಚನಾ

ಕಾರ್ಯಾಗಾರವನ್ನು ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆಸಲು ಆಯೋಜಿಸಲಾಗಿದ್ದು, ಪ್ರಮುಖ ಪಾಲುದಾರ ಸರ್ಕಾರಿ ಇಲಾಖೆಗಳಾದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಪದವಿ-ಪೂರ್ವ ಶಿಕ್ಷಣ, ಮಹಿಳೆಯರು ಮತ್ತು ಮಕ್ಕಳ ಅಭಿವೃದ್ಧಿ, ಗ್ರಾಮೀಣಾಭಿವೃಧ್ಧಿ ಮತ್ತು ಪಂಚಾಯತ್‌ರಾಜ್, ನಗರಾಭಿವೃದ್ಧಿ, ಗೃಹ/ಪೊಲೀಸ್, ಮಕ್ಕಳ ಹಕ್ಕುಗಳ ರಕ್ಷಣೆ, ಕಾರ್ಮಿಕ ಮತ್ತು ಸರ್ಕಾರೇತರ ಸಂಸ್ಥೆಗಳಾದ ದಿ ಯೂನಿಯನ್ ಮತ್ತು ಮಕ್ಕಳ ಹಕ್ಕುಗಳಿಗೋಸ್ಕರ ಹೋರಾಡುತ್ತಿರುವ ರಾಜ್ಯದ ಇತರೆ ಅಭಿವೃದ್ಧಿ ಸಂಸ್ಥೆಗಳ ಸಕ್ರಿಯ ಪಾಲ್ಗೊಳ್ಳುವಿಕೆಯೊಂದಿಗೆ ರಾಜ್ಯದ ಪ್ರಸ್ತುತ ವಾಸ್ತವತೆ ಮತ್ತು ಸನ್ನದ್ಧತೆಯ ಬಗ್ಗೆ ಚರ್ಚಿಸಿ ಒಂದು ಸಮಗ್ರ ಬಹು-ಪಾಲುದಾರರ ಕಾರ್ಯತಂತ್ರನ್ನು ಯುವಜನತೆಯ ಆರೋಗ್ಯದ ದೃಷ್ಟಿಯಿಂದ ಹೊರತರಲು ಯೋಜಿಸಲಾಗಿದೆ.

ಕಾರ್ಯಾಗಾರದಲ್ಲಿ ರಾಜ್ಯ ಸರ್ಕಾರದ ಅನೇಕ ಇಲಾಖೆಗಳು, ಖಾಸಗಿ ಸಂಘ ಸಂಸ್ಥೆಗಳು ಮತ್ತು ತಂಬಾಕು ಬೆಳೆಯುವ ರೈತರು ಸಹ ಪಾಲ್ಗೊಂಡಿದ್ದರು. ಇದೇ ಸಂದರ್ಭದಲ್ಲಿ ತಂಬಾಕು ಬಳಕೆಯ ಜಾಗೃತಿ ಭಿತ್ತಿಪತ್ರಗಳನ್ನು ಬಿಡುಗಡೆ ಮಾಡಲಾಯಿತು.

## ‘ಖೇಲೋ ಇಂಡಿಯಾ ರಾಜ್ಯ ಉತ್ಕೃಷ್ಟತಾ ಕೇಂದ್ರ’ದ ಲೋಕಾರ್ಪಣಾ ಸಮಾರಂಭ

ಬೆಂಗಳೂರು, ಡಿಸೆಂಬರ್ 23 (ಕರ್ನಾಟಕ ವಾರ್ತೆ):

ಭಾರತ ಸರ್ಕಾರದ ಯುವ ವ್ಯವಹಾರ ಮತ್ತು ಕ್ರೀಡಾ ಇಲಾಖೆಯು ಜಯಪ್ರಕಾಶ್ ನಾರಾಯಣ ರಾಷ್ಟ್ರೀಯ ಯುವಜನ ಕೇಂದ್ರ, ವಿದ್ಯಾನಗರ, ಬೆಂಗಳೂರನ್ನು ಅಥ್ಲೆಟಿಕ್ಸ್, ಈಜು ಮತ್ತು ಶೂಟಿಂಗ್ ಕ್ರೀಡೆಗಳಲ್ಲಿ ‘ಖೇಲೋ ಇಂಡಿಯಾ ರಾಜ್ಯ ಉತ್ಕೃಷ್ಟತಾ ಕೇಂದ್ರ’ವಾಗಿ ಗುರುತಿಸಿದೆ. ಭಾರತ ಸರ್ಕಾರವು ಸದರಿ ಕೇಂದ್ರದಲ್ಲಿ ಉನ್ನತ ಗುಣಮಟ್ಟದ ಮಾನವ ಸಂಪನ್ಮೂಲದ ಸೇವೆ ಪಡೆಯಲು, ಕ್ರೀಡಾ ಸಲಕರಣೆಗಳು, ಜಿಮ್ ಉಪಕರಣಗಳನ್ನು ಖರೀದಿಸಲು ‘ಕ್ರೀಡಾ ವಿಜ್ಞಾನ ಮೌಲ್ಯಮಾಪನ ಕೇಂದ್ರ’ ಆರಂಭಿಸಲು ಕ್ರೀಡಾ ಕಿಟ್‌ಗಳನ್ನು ಖರೀದಿಸಲು ಮತ್ತಿತರ ವೆಚ್ಚಗಳನ್ನು ಭರಿಸಲು ಅನುದಾನ ನೀಡುವುದು. ಭಾರತ ಸರ್ಕಾರವು 2020-21 ನೇ ಸಾಲಿನ ಮೊದಲ ಮೂರು ತಿಂಗಳ ವೆಚ್ಚ ಭರಿಸಲು ಈಗಾಗಲೇ ರೂ 219.27 ಲಕ್ಷ ಅನುದಾನವನ್ನು ಮಂಜೂರು ಮಾಡಿರುತ್ತದೆ.

‘ಖೇಲೋ ಇಂಡಿಯಾ ರಾಜ್ಯ ಉತ್ಕೃಷ್ಟತಾ ಕೇಂದ್ರ’ದ ಲೋಕಾರ್ಪಣೆಯನ್ನು ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ಇವರು ಕಿರಣ್ ರೆಜಿಜು, ರಾಜ್ಯ ಮಂತ್ರಿಗಳು (ಸ್ವತಂತ್ರ ಪ್ರಭಾರ), ಯುವ ವ್ಯವಹಾರ ಮತ್ತು ಕ್ರೀಡಾ ಮಂತ್ರಾಲಯ, ಭಾರತ ಸರ್ಕಾರ ಇವರ ಉಪಸ್ಥಿತಿಯಲ್ಲಿ ನೆರವೇರಿಸಿದರು. ಈ ಸಂದರ್ಭದಲ್ಲಿ ಒಲಿಂಪಿಯನ್ ಹಾಗೂ ಅರ್ಜುನ ಪ್ರಶಸ್ತಿ ವಿಜೇತ ಕ್ರೀಡಾಪಟುಗಳಾದ ಪಿ.ಎನ್. ಪ್ರಕಾಶ್ ಮತ್ತು ರಘುನಾಥ್ ವಿ.ಆರ್. ಇವರು ಆಹ್ವಾನಿತ ಗಣ್ಯರಾಗಿ ಭಾಗವಹಿಸಿದರು. ಡಾ. ಶಾಲಿನಿ ರಜನೀಶ್, ಭಾ.ಆ.ಸೇ., ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕೆ. ಶ್ರೀನಿವಾಸ್, ಭಾ.ಆ.ಸೇ., ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮತ್ತು ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧೀನದಲ್ಲಿ ಜಯಪ್ರಕಾಶ್ ನಾರಾಯಣ ರಾಷ್ಟ್ರೀಯ ಯುವಜನ ಕೇಂದ್ರವು ಕೆಂಪೇಗೌಡ ಅಂತರ-ರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆ, ವಿದ್ಯಾನಗರ, ಬೆಂಗಳೂರು ಇಲ್ಲಿ ಕಾರ್ಯನಿರ್ವಹಿಸುತ್ತಿದೆ.

68 ಎಕರೆ ವಿಸ್ತೀರ್ಣದ ನಿವೇಶನದಲ್ಲಿ ಈ ಕೇಂದ್ರವು ಕಾರ್ಯನಿರ್ವಹಿಸುತ್ತಿದ್ದು, ಕ್ರೀಡಾ ವಸತಿ ಶಾಲೆ ಹಾಗೂ ಯುವಜನ ತರಬೇತಿ ಕೇಂದ್ರಗಳನ್ನು ಹೊಂದಿದ್ದು, ಕೆಳಕಾಣಿಸಿದ ಸೌಲಭ್ಯಗಳನ್ನು ಹೊಂದಿದೆ. ಕ್ರೀಡಾ ವಸತಿ ಶಾಲೆ (ಅಥ್ಲೆಟಿಕ್ಸ್, ಫುಟ್ಬಾಲ್, ವಾಲಿಬಾಲ್ ಮತ್ತು ಬಾಸ್ಕೆಟ್‌ಬಾಲ್) 400 ಮೀಟರ್ ಅಂತರ-ರಾಷ್ಟ್ರೀಯ ಗುಣಮಟ್ಟದ ಸಿಂಥೆಟಿಕ್ ಅಥ್ಲೆಟಿಕ್ಸ್ ಟ್ರ್ಯಾಕ್. 25 ಮೀಟರ್ ಅಳತೆಯ ಈಜುಕೊಳ ಒಳಾಂಗಣ ಕ್ರೀಡಾಂಗಣ 10 ಮೀಟರ್ ಶೂಟಿಂಗ್ ರೇಂಜ್, ಆಯುರ್ವೇದಿಕ್ ಆರೋಗ್ಯ ಕೇಂದ್ರ. ಸಿಂಥೆಟಿಕ್ಸ್ ಬಾಸ್ಕೆಟ್‌ಬಾಲ್ ಅಂಕಣ, ಫುಟ್ಬಾಲ್ ಅಂಕಣ, ಅಂತರ-ರಾಷ್ಟ್ರೀಯ ಗುಣಮಟ್ಟದ ಜಿಮ್, 250 ಕ್ಕೂ ಹೆಚ್ಚು ಕ್ರೀಡಾಪಟುಗಳಿಗೆ ವಸತಿ ವ್ಯವಸ್ಥೆ ಮತ್ತಿತರ ಸೌಲಭ್ಯಗಳು.

ವಿದ್ಯಾನಗರ ಕ್ರೀಡಾ ವಸತಿ ನಿಲಯವು 1994 ರಲ್ಲಿ ಆರಂಭಗೊಂಡಿದ್ದು, ಅನೇಕ ಅಂತರ-ರಾಷ್ಟ್ರೀಯ ಕ್ರೀಡಾಪಟುಗಳನ್ನು ರೂಪಿಸಿದ್ದು, ಪ್ರಸ್ತುತ ದಾನೇಶ್ವರಿ ಎ.ಟಿ., ಶಶಿಕಾಂತ್ ವಿ.ಎ., ಪ್ರಿಯಾಂಕ ಪಿ. ಮತ್ತು ಹರ್ಷಿತ ಕೆ.ಬಿ. ಮೊದಲಾದ ಅಂತರ-ರಾಷ್ಟ್ರೀಯ ಕ್ರೀಡಾಪಟುಗಳು ಕ್ರೀಡಾಭ್ಯಾಸದಲ್ಲಿ ನಿರತರಾಗಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕಾರ್ಮಿಕರ ಕಲ್ಯಾಣ ಕಾಯ್ದೆ ನಿಧಿ ವಂತಿಕೆ ಆನ್‌ಲೈನ್ ಮೂಲಕ ಪಾವತಿಸಲು ಸೂಚನೆ

ಬೆಂಗಳೂರು, ಡಿಸೆಂಬರ್ 23 (ಕರ್ನಾಟಕ ವಾರ್ತೆ):

ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ 1965ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಾರ್ಖಾನೆಗಳು, ಪ್ಲಾಂಟೇಶನ್‌ಗಳು, ಮೋಟಾರು ವಾಹನ ಸಂಸ್ಥೆಗಳು ಹಾಗೂ 50 ಮತ್ತು ಅದಕ್ಕಿಂತ ಹೆಚ್ಚು ಕಾರ್ಮಿಕರನ್ನು ಹೊಂದಿರುವ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು/ITBT ಸಂಸ್ಥೆಗಳು, ಚಾರಿಟಬಲ್ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು, ಕರ್ನಾಟಕ ಸೊಸೈಟಿ ಕಾಯ್ದೆ 1960 ರಡಿಯಲ್ಲಿ ನೊಂದಣಿಯಾಗಿರುವ ಸಂಘಗಳು ಕಡ್ಡಾಯವಾಗಿ ಆನ್‌ಲೈನ್ ಮುಖಾಂತರ ವಂತಿಕೆ ಪಾವತಿಸ ಬೇಕಾಗಿರುತ್ತದೆ. ಈ ತಿದ್ದುಪಡಿ ಕಾಯ್ದೆಯನ್ನು ಮೂಲ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ 1965 ಸೆಕ್ಷನ್ 7ಎ ಗೆ ಸೇರಿಸಲಾಗಿದೆ. ಆದ್ದರಿಂದ ಕಾರ್ಮಿಕರು ರೂ.20/- ಮಾಲೀಕರು ರೂ.40/- ರಂತೆ ಒಟ್ಟು ರೂ 60/- ರಂತೆ ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿಗೆ ವಂತಿಗೆ ಪಾವತಿಸುವುದು ಕಡ್ಡಾಯವಾಗಿರುತ್ತದೆ.

ಈ ಕಾಯ್ದೆಯಡಿಯಲ್ಲಿ ಆನ್‌ಲೈನ್ ಮುಖಾಂತರ ವಂತಿಗೆ ಪಾವತಿಸಬೇಕಾದ ವೆಬ್‌ಸೈಟ್ ವಿಳಾಸ www.klwb.karnataka.gov.in ವಂತಿಗೆ ಪಾವತಿಗೆ ಕಡೆಯ ದಿನಾಂಕ: 15-01-2021 (2020 ನೇ ಕ್ಯಾಲೆಂಡರ್ ವರ್ಷಕ್ಕೆ) ನಿಯಮ ಪಾಲಿಸದ ಸಂಸ್ಥೆಗಳಿಗೆ ಮೊದಲ 3 ತಿಂಗಳಿಗೆ ಶೇಕಡ 12% ರಂತೆ ಹಾಗೂ ನಂತರದ ತಿಂಗಳಿಗೆ ಶೇಕಡ 18% ಬಡ್ಡಿಯನ್ನು ದಂಡವಾಗಿ ವಿಧಿಸಬಹುದು, ಹಾಗು ಕಲ್ಯಾಣ ಆಯುಕ್ತರಿಂದ

ತಪಾಸಣೆ/ತನಿಖೆಗೆ ಒಳಪಡಬೇಕಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8277291175, 8277120505, 080-23475188 ಮೂಲಕ ಸಂಪರ್ಕಿಸಬಹುದು.

# ಅವಧಿ ವಿಸ್ತರಣೆ

ಬೆಂಗಳೂರು, ಡಿಸೆಂಬರ್ 23 (ಕರ್ನಾಟಕ ವಾರ್ತೆ):

**2021** ನೇ ಸಾಲಿನ ಸಾಮಾನ್ಯ ವಿಶೇಷ ಘಟಕ ಮತ್ತು ಗಿರಿಜನ ಉಪ ಯೋಜನೆಯಡಿ ಸಾಂಸ್ಕೃತಿಕ ಸಂಘ ಸಂಸ್ಥೆಗಳ ಚಟುವಟಿಕೆಗೆ ಧನಸಹಾಯ ಅಸಂಘಟಿತ ಕಲಾವಿದರಿಗೆ ವಾದ್ಯಪರಿಕರ/ವೇಷಭೂಷಣ ಖರೀದಿಗೆ ಧನಸಹಾಯ ಮತ್ತು ಆಸಕ್ತ ಶಿಲ್ಪ/ಚಿತ್ರಕಲಾವಿದರಿಗೆ ಕಲಾಪ್ರದರ್ಶನಕ್ಕೆ ಧನಸಹಾಯ ನೀಡಲು ಸೇವಾಸಿಂಧು ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಈಗಾಗಲೇ ಪ್ರಕಟಣೆಯನ್ನು ನೀಡಿ ಪ್ರಕ್ರಿಯೆ ಆರಂಭಿಸಲಾಗಿದೆ. ಸಂಘ ಸಂಸ್ಥೆಗಳು ಹಾಗೂ ಕಲಾವಿದರ ಕೋರಿಕೆಯ ಮೇರೆಗೆ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ಡಿಸೆಂಬರ್ 27 ರ ಬದಲಿಗೆ 05-01-2021 ರವರೆಗೆ ವಿಸ್ತರಿಸಿ ಸೇವಾಸಿಂಧು ಮೂಲಕ ಧನಸಹಾಯಕ್ಕೆ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Last Date Extended

**Bengaluru, December 23 (Karnataka Information)**

It is mandatory for the below mentioned establishments to remit contributions as per the Karnataka Labour Welfare Fund, Act 1965. Compulsory contributions has to be paid by all factories, plantations, workshops, motor, omnibus services and shops and commercial establishments/ITBT firms employing more than 50 workers, charitable trusts, societies registered under Karnataka Societies Registration Act, 1960, etc.

Factory/Establishment will pay contribution at the ratio of **Rs. 20:40** (Employees Rs. 20/ Employers Rs. 40) & to be remitted through online only. Labour welfare fund payment for online www.klwb.karnataka.gov.in **LAST DATE TO PAY CONTRIBUTION: 15-01-2021 (CALENDER YEAR 2020)** Delay in payment of Contributions will attract penal interest at the rate of 12% for 1st 3 months and after 3 months 18% on the amount due, and inspections by the Welfare

Commissioner. For further clarification contact phone No. **8277291175, 8277120505, 080–23475188**.

## ಸಂಬೋಧನೆಯಲ್ಲಿ ತಿದ್ದುಪಡಿ

**ಬೆಂಗಳೂರು, ಡಿಸೆಂಬರ್ 23 (ಕರ್ನಾಟಕ ವಾರ್ತೆ):**

**ಮಕ್ಕಳ ರಕ್ಷಣಾ ನಿರ್ದೇಶನಾಲಯವು ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ–2015 ನ್ನು ಅನುಷ್ಠಾನಗೊಳಿಸುತ್ತಿದೆ. ಸದರಿ ಕಾಯ್ದೆ ಅನುಸಾರ ಕಾನೂನಿನ ಸಂಘರ್ಷಕ್ಕೆ ಒಳಪಟ್ಟ ಮಕ್ಕಳಿಗೆ ಬಾಲಪರಾಧಿಗಳು ಎಂದು ಮಕ್ಕಳ ಪಾಲನಾ ಸಂಸ್ಥೆಗಳನ್ನು ಸುಧಾರಣಾ ಸಂಸ್ಥೆಗಳು (ಕರೆಕ್ಷನಲ್ ಹೋಮ್ಸ್) ಎಂದು ಕರೆಯುವುದು ತಪ್ಪಾಗುತ್ತದೆ.**

**ಆದ್ದರಿಂದ ಬಾಲಪರಾಧಿಗಳು ಎಂದು ಸಂಬೋಧಿಸುವ ಬದಲು "ಕಾನೂನಿನ ಸಂಘರ್ಷಕ್ಕೆ ಒಳಪಟ್ಟ ಮಕ್ಕಳು" ಎಂದು, ಸುಧಾರಣಾ ಸಂಸ್ಥೆಗಳು/ಕರೆಕ್ಷನಲ್ ಹೋಮ್ಸ್ ಎಂದು ಸಂಬೋಧಿಸುವ ಬದಲು "ಮಕ್ಕಳ ಪಾಲನಾ ಸಂಸ್ಥೆಗಳು" ಎಂದು ಸಂಬೋಧಿಸಬೇಕೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## Change in mode of communication

Bengaluru, December 23 (Karnataka Information)

According to Directorate of Child Protection implementing Juvenile Justice (Care and Protection of Children Act 2015 addressing Children who are in Conflict with the Law as Balaparadhi and Child Care Institutions as Correctinal Institutions/Remand homes is inappropriate.

It is very important to educate all not to address Children in Conflict with the Law as Balaparadhi and not to address Child Care Institutions as Correctional Institutions/Remand homes says official press note release.

.

**Karnataka State Pollution Control Board**
**ParisaraBhavan, Bengaluru**
**AQI of the CAAQM stations established in Bengaluru City**
**Date :23.12.2020**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | * | * | * |
| 2 | Jayanagar 5th Block, Shalini ground | 127 | Moderate | $PM_{2.5}$ |
| 3 | KAVIKA, Mysore Road | 103 | Moderate | $PM_{.10}$ |
| 4 | Rajeev Gandhi Institute of Chest Disease, NIMHANS, Hombegowda Nagar | 90 | Satisfactory | $O_3$ |
| 5 | HSR Layout, near Central Silkboard | 92 | Satisfactory | $PM_{2.5}$ |
| 6 | City Railway Station, Magestic, Bengaluru | 72 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 29 | Good | $PM_{10}$ |
| 8 | BWSSB, Kadabesanahalli | 105 | Moderate | $PM_{2.5}$ |
| 9 | Peenya | 105 | Moderate | $O_3$ |
| 10 | BTM Layout | 123 | Moderate | $O_3$ |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |

## ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ

## ಪರಿಸರ ಭವನ, ಬೆಂಗಳೂರು.

### ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಕ್ಷಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು

**ದಿನಾಂಕ: 23.12.2020**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | * | * | * |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 127 | ಸಾಧಾರಣ | $PM_{2.5}$ |
| 3 | ಕವಿಕ, ಮೈಸೂರುರಸ್ತೆ | 103 | ಸಾಧಾರಣ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 90 | ತೃಪ್ತಿಕರ | $O_3$ |
| 5 | ಹೆಚ್.ಎಸ್.ಆರ್ ಲೇಔಟ್, [illegible] | 92 | ತೃಪ್ತಿಕರ | $PM_{2.5}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 72 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 29 | ಉತ್ತಮ | $PM_{10}$ |
| 8 | BWSSB, ಕಾಡಬೀಸನಹಳ್ಳಿ | 105 | ಸಾಧಾರಣ | $PM_{2.5}$ |
| 9 | ಪೀಣ್ಯ | 105 | ಸಾಧಾರಣ | $O_3$ |
| 10 | ಬಿಟಿಎಂ ಲೇಔಟ್ | 123 | ಸಾಧಾರಣ | $O_3$ |

| **ವರ್ಗ(ಶ್ರೇಣಿ)** | **ಉಂಟಾಗಬಹುದಾದಆರೋಗ್ಯ ಪರಿಣಾಮಗಳು** |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |